ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೧೩**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೇ ಅಧಿವೇಶನ**

**(ಮುಂದುವರೆದ ಉಪವೇಶನ)**

**ಮಂಗಳವಾರ, ದಿನಾಂಕ: ೨೮ನೇ ಮಾರ್ಚ್, ೨೦೧೭**

---

**ಸಮೂಹ – II**

೧. ಇಂಧನ ಸಚಿವರು

೨. ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೪. ಕೃಷಿ ಸಚಿವರು

೫. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು

೬. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು

---

## ಕೃಷಿ ಉತ್ಪನ್ನಗಳಿಗೆ ಬೆಂಬಲ ಬೆಲೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) –**

೧೮೧(೧೮೭೩) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರೈತರು ಬೆಳೆದ ಉತ್ಪನ್ನಗಳಿಗೆ ಸರಿಯಾದ ಬೆಂಬಲ ಬೆಲೆ ಸಿಗದೆ ತೊಂದರೆಗೊಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ರೈತರ ಕೃಷಿ ಉತ್ಪನ್ನಗಳಿಗೆ ಬೆಂಬಲ ಬೆಲೆ ನಿಗದಿಪಡಿಸಲು ಕೃಷಿ ಬೆಲೆ ಆಯೋಗವನ್ನು ಸರ್ಕಾರ ಯಾವಾಗ ರಚಿಸಿದೆ;

(ಇ) ಈ ಆಯೋಗವು ಯಾವಾಗಿನಿಂದ ಕಾರ್ಯಾರಂಭ ಮಾಡಿದೆ; ಅಧ್ಯಕ್ಷರು ಹಾಗೂ ಸದಸ್ಯರು ಯಾರು;

(ಈ) ಸರ್ಕಾರಕ್ಕೆ ಆಯೋಗವು ವರದಿ ಸಲ್ಲಿಸಿದೆಯೇ;

(ಉ) ಹಾಗಿದ್ದಲ್ಲಿ, ಬೆಂಬಲ ಬೆಲೆ ಆಯೋಗದ ವರದಿಯ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು; ವರದಿಯಿಂದ ಎಷ್ಟು ರೈತರಿಗೆ ಅನುಕೂಲವಾಗಿದೆ?

## ಕರ್ನಾಟಕ ರಾಜ್ಯ ಉಗ್ರಾಣ ನಿಗಮದ (PPP) ಮಾದರಿಯಲ್ಲಿ ಸೌರ ವಿದ್ಯುತ್ ಪ್ಯಾನಲ್ ಅಳವಡಿಸುವ ಬಗ್ಗೆ

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೧೮೨(೧೭೮೧) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಾಜ್ಯ ಉಗ್ರಾಣ ನಿಗಮವು ಸಾರ್ವಜನಿಕ ಮತ್ತು ಖಾಸಗಿ ಸಹಭಾಗಿತ್ವದ (PPP) ಮಾದರಿಯಲ್ಲಿ ಸೌರ ವಿದ್ಯುತ್ ಪ್ಯಾನಲ್‌ಗಳನ್ನು ಅಳವಡಿಸಲು ರಾಜ್ಯ ಸರ್ಕಾರವು ಅನುಮತಿ ನೀಡಿರುತ್ತದೆಯೇ; ಅನುಮತಿ ನೀಡುವ ಮೊದಲು ಉಗ್ರಾಣ ನಿಗಮವು ಟೆಂಡರ್ ಪ್ರಕ್ರಿಯೆಯನ್ನು ನಡೆಸಿರುತ್ತದೆಯೇ;

(ಆ) ಟೆಂಡರ್ ಪ್ರಕ್ರಿಯೆ ನಡೆಸಿದ್ದಲ್ಲಿ, ಎಷ್ಟು ಟೆಂಡರ್‌ಗಳು ಅಂಗೀಕೃತವಾಗಿರುತ್ತದೆ; ಸದರಿ ಟೆಂಡರ್‌ಗಳಿಗೆ ರಾಜ್ಯ ಸರ್ಕಾರದಿಂದ ಅನುಮೋದನೆ ನೀಡಲಾಗಿದೆಯೇ;

(ಇ) ರಾಜ್ಯ ಸರ್ಕಾರದ ಆಡಳಿತಾತ್ಮಕ ಅನುಮೋದನೆಗೆ ಮುನ್ನ ಟೆಂಡರ್ ಪ್ರಕ್ರಿಯೆ ನಡೆಸಲು ಕಾನೂನಿನಲ್ಲಿ ಅವಕಾಶವಿದೆಯೇ; ರಾಜ್ಯ ಸರ್ಕಾರವು ಸದರಿ ಟೆಂಡರ್‌ಗಳನ್ನು ರದ್ದುಪಡಿಸಲು ಯಾವುದಾದರೂ ಕ್ರಮ

ಕೈಗೊಂಡಿದೆಯೇ ಮತ್ತು ಆಡಳಿತಾತ್ಮಕ ಅನುಮೋದನೆ ಇಲ್ಲದೇ ಟೆಂಡರ್ ಪ್ರಕ್ರಿಯೆ ಕೈಗೊಂಡ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ;

(ಈ) ಸಾರ್ವಜನಿಕ ಮತ್ತು ಖಾಸಗಿ ಸಹಭಾಗಿತ್ವದ (PPP) ಮಾದರಿಯಲ್ಲಿ ಸೌರ ವಿದ್ಯುತ್ ಪ್ಯಾನಲ್‌ಗಳ ಮೂಲಕ ಉತ್ಪಾದಿಸಬಹುದಾದ ಒಟ್ಟು ಮೆಗಾವ್ಯಾಟ್ ವಿದ್ಯುಚ್ಛಕ್ತಿಯ ಉತ್ಪಾದನೆಯೆಷ್ಟು; ಮತ್ತು ಸದರಿ ಉತ್ಪಾದನಾ ವಿದ್ಯುತ್ ಅನ್ನು ಯೂನಿಟ್ ದರದಲ್ಲಿ ಖರೀದಿಸಲು ಸರ್ಕಾರವು ಒಡಂಬಡಿಕೆ ಮಾಡಿಕೊಂಡಿರುತ್ತದೆಯೇ; ಮಾಡಿಕೊಂಡಿದ್ದಲ್ಲಿ, ಸದರಿ ಖರೀದಿಯ ದರ ಮಾರುಕಟ್ಟೆಯ ದರಕ್ಕೆ ಅನುಗುಣವಾಗಿರುತ್ತದೆಯೇ?

## ಚಿಕ್ಕಮಗಳೂರು ಜಿಲ್ಲೆಯ ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡ ಕಾಮಗಾರಿಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) –**

೧೮೩(೧೮೨೧) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಮೂರು ವರ್ಷಗಳಿಂದ ಚಿಕ್ಕಮಗಳೂರು ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಿಂದ ಕೈಗೊಂಡ ಕಾಮಗಾರಿಗಳು ಯಾವುವು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಯಾವ ಯಾವ ಲೆಕ್ಕಶೀರ್ಷಿಕೆಗಳಡಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಆ ಪೈಕಿ ಪೂರ್ಣಗೊಂಡ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು; ಆ ಪೈಕಿ ಪೂರ್ಣಗೊಂಡು ಗುತ್ತಿಗೆದಾರರಿಗೆ ಹಣ ಪಾವತಿಯಾಗದೆ ಬಾಕಿಯಿರುವ ಬಿಲ್ಲುಗಳ ಮೊತ್ತವೆಷ್ಟು; (ಲೆಕ್ಕಶೀರ್ಷಿಕೆವಾರು, ಕಾಮಗಾರಿವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕಳೆದ ಮೂರು ವರ್ಷಗಳಿಂದ ಗುತ್ತಿಗೆದಾರರಿಗೆ ಬಿಡುಗಡೆ ಮಾಡಿರುವ ಕಾಮಗಾರಿಗಳ ಬಿಲ್ಲುಗಳ ಮೊತ್ತವೆಷ್ಟು? (ವರ್ಷಾವಾರು ಮತ್ತು ಕಾಮಗಾರಿಗಳವಾರು ಮಾಹಿತಿ ನೀಡುವುದು)

## ಹುಬ್ಬಳ್ಳಿ–ಧಾರವಾಡ ಮಹಾನಗರದಲ್ಲಿನ ರಸ್ತೆ ನಿರ್ಮಾಣದ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೮೪(೧೮೧೪) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹುಬ್ಬಳ್ಳಿ–ಧಾರವಾಡ ಮಹಾನಗರಗಳಲ್ಲಿ ಕಳೆದ ಒಂದು ವರ್ಷದಿಂದ ಲೋಕೋಪಯೋಗಿ ಇಲಾಖೆಯಿಂದ ಎಷ್ಟು ರಸ್ತೆ ನಿರ್ವಾಣ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಆ) ಅವುಗಳು ಯಾವುವು; ಪ್ರಸ್ತುತ ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿದೆ; (ವಿವರ ನೀಡುವುದು)

(ಇ) ಕೈಗೆತ್ತಿಕೊಳ್ಳಲು ಉದ್ದೇಶಿಸಿರುವ ರಸ್ತೆ ನಿರ್ಮಾಣ ಕಾಮಗಾರಿಗಳು ಯಾವುವು? (ಸಂಪೂರ್ಣ ಮಾಹಿತಿ ನೀಡುವುದು)

## ಬೆಂಗಳೂರು ಜಿಲ್ಲಾ ಪಂಚಾಯಿತಿ ವ್ಯಾಪ್ತಿಯಲ್ಲಿರುವ ರೇಷ್ಮೆ ಹುಳುಗಳು ಮತ್ತು ಸಾಕಾಣಿಕೆ ಮನೆಗಳ ಕುರಿತು

**ಶ್ರೀ ಎಂ. ನಾರಾಯಣ ಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೮೫(೧೮೦೩) ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಇರುವ ರೇಷ್ಮೆ ಹುಳು ಸಾಕಾಣಿಕೆ ಮನೆಗಳು ಮತ್ತು ತಾಂತ್ರಿಕ ಕೇಂದ್ರಗಳ ಸಂಖ್ಯೆ ಎಷ್ಟು;

(ಆ) ಬೆಂಗಳೂರು ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಎಷ್ಟು ಹೆಕ್ಟೇರುಗಳಲ್ಲಿ ರೇಷ್ಮೆ ಕೃಷಿ ಮಾಡಲಾಗುತ್ತಿದೆ;

(ಇ) ಸದರಿ ರೇಷ್ಮೆ ಬೆಳೆಗಾರರಿಗೆ ಸೂಕ್ತ ಮಾರುಕಟ್ಟೆಯನ್ನು ಒದಗಿಸಲಾಗಿದೆಯೇ?

## ಹನಿ ನೀರಾವರಿ ಯೋಜನೆಯ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೮೬(೧೮೭೯) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತೋಟಗಾರಿಕೆ ಇಲಾಖೆಯಲ್ಲಿ ೨೦೧೬–೧೭ನೇ ಸಾಲಿಗೆ ಹನಿ ನೀರಾವರಿ ಯೋಜನೆಯಡಿ ಬಿಡುಗಡೆಯಾದ ಅನುದಾನ ಎಷ್ಟು; ಆ ಪೈಕಿ ಕೇಂದ್ರ ಮತ್ತು ರಾಜ್ಯದ ಪಾಲು ಎಷ್ಟು; ಇದರಲ್ಲಿ ಭರಿಸಲಾದ ವೆಚ್ಚವೆಷ್ಟು;

(ಆ) ೨೦೧೬–೧೭ನೇ ಸಾಲಿನಲ್ಲಿ ರಾಜ್ಯದಲ್ಲಿ ಹನಿ ನೀರಾವರಿ ಯೋಜನೆಯಡಿ ಹನಿ ನೀರಾವರಿ ಪದ್ಧತಿಯನ್ನು ಅಳವಡಿಸಿಕೊಂಡ ರೈತರ ಸಂಖ್ಯೆ ಎಷ್ಟು; ಎಷ್ಟು ಎಕರೆಗೆ ಅಳವಡಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಹನಿ ನೀರಾವರಿಯನ್ನು ಯಾವ ಯಾವ ಬೆಳೆಗಳಿಗೆ ಅಳವಡಿಸಲಾಗಿದೆ? (ಬೆಳೆವಾರು ವಿವರ ನೀಡುವುದು)

## ಪಟ್ಟಣ ಪಂಚಾಯತ್‌ನಲ್ಲಿ ಹೊರಗುತ್ತಿಗೆ ನೌಕರರ ಸಮಸ್ಯೆಗಳ ಬಗ್ಗೆ

**ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೮೭(೧೭೮೦) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಪಟ್ಟಣ ಪಂಚಾಯತ್‌ಗಳು ಎಷ್ಟು; ಅಲ್ಲಿ ಕಾರ್ಯನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರ ಖಾಯಮಾತಿಗಾಗಿ ಸರ್ಕಾರ ಕೈಗೊಂಡಿರುವ ಕ್ರಮವೇನು; ನೇರ ನೇಮಕಾತಿಯಲ್ಲಿ ಇವರಿಗೆ ರಾಜ್ಯ ಪಟ್ಟಣ ಪಂಚಾಯತ್‌ಗಳಲ್ಲಿ ಕಿರಿಯ ಆರೋಗ್ಯ ನಿರೀಕ್ಷಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಯಾವ ರೀತಿ ಕ್ರಮ ಕೈಗೊಂಡಿದೆ; ಖಾಲಿ ಇರುವ ಹುದ್ದೆಗಳೆಷ್ಟು;

(ಆ) ಇದರಲ್ಲಿ ನೇರ ನೇಮಕಾತಿ ಹುದ್ದೆಗಳೆಷ್ಟು; ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮವೇನು;

(ಇ) ಇದರಲ್ಲಿ ಮುಂಬಡ್ತಿ ಹುದ್ದೆಗಳೆಷ್ಟು; ಮುಂಬಡ್ತಿಯ ಮಾನದಂಡಗಳೇನು?

## ಮಡಿಕೇರಿ ನಗರದ ಅಭಿವೃದ್ಧಿಗಾಗಿ ಅನುದಾನ ಬಿಡುಗಡೆ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೮೮(೧೮೮೩) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೨–೧೩ ರಿಂದ ಇಲ್ಲಿಯವರೆಗೆ ಸರ್ಕಾರದಿಂದ ಮಡಿಕೇರಿ ನಗರಸಭೆಗೆ ಅಭಿವೃದ್ಧಿ ಕಾರ್ಯಗಳಿಗೆ ಬಿಡುಗಡೆಯಾದ, ಖರ್ಚಾದ ಅನುದಾನವೆಷ್ಟು; (ವರ್ಷಾವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಅನುದಾನದಲ್ಲಿ ಕೈಗೊಂಡ ಕಾಮಗಾರಿ / ಅಭಿವೃದ್ಧಿ ಕಾರ್ಯಗಳು ಯಾವುವು; (ಪೂರ್ಣ ಮಾಹಿತಿ ನೀಡುವುದು)

(ಇ) ಮಡಿಕೇರಿ ನಗರವು, ರಾಜ್ಯದಲ್ಲಿ ಅತೀ ಹೆಚ್ಚು ಪ್ರವಾಸಿಗರು ಭೇಟಿ ನೀಡುವ ಸ್ಥಳವಾಗಿರುವುದರಿಂದ ಹಾಗೂ ಹೆಚ್ಚು ಮಳೆ ಬೀಳುವ ಪ್ರದೇಶವಾಗಿರುವುದರಿಂದ, ನಗರದ ಅಭಿವೃದ್ಧಿ ಕೆಲಸಗಳಿಗೆ ಹೆಚ್ಚು ಅನುದಾನದ ಅವಶ್ಯವಿರುವುದರಿಂದ, ವಿಶೇಷ ಪ್ಯಾಕೇಜ್ ನೀಡುವ ಪ್ರಸ್ತಾವ ಸರ್ಕಾರದ ಮುಂದಿದೆಯೇ? (ಸಂಪೂರ್ಣ ವಿವರ ನೀಡುವುದು)

## ಗೋಶಾಲೆಗಳಲ್ಲಿ ಜಾನುವಾರುಗಳಿಗೆ ಸಾಕಾಗುವಷ್ಟು ಮೇವು ಪೂರೈಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) –**

೧೮೯(೧೮೫೭+೧೮೫೮) ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಭೀಕರ ಬರಗಾಲವಿರುವುದರಿಂದ ಜಾನುವಾರುಗಳ ಸಂರಕ್ಷಣೆಗಾಗಿ ಸ್ಥಾಪಿಸಿದ ಗೋಶಾಲೆಗಳ ಸಂಖ್ಯೆ ಎಷ್ಟು;

(ಆ) ಈ ಗೋಶಾಲೆಗಳಲ್ಲಿ ಜಾನುವಾರುಗಳಿಗೆ ಎಷ್ಟು ಪ್ರಮಾಣದ ಮೇವನ್ನು ಪೂರೈಸಲಾಗುತ್ತಿದೆ;

(ಇ) ಜಾನುವಾರುಗಳಿಗೆ ಸಾಕಾಗುವಷ್ಟು ಪ್ರಮಾಣದ ಮೇವನ್ನು ಪೂರೈಸದಿದ್ದರಿಂದ ಅವು ನಿತ್ರಾಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಜಾನುವಾರುಗಳಿಗೆ ಸಾಕಷ್ಟು ಪ್ರಮಾಣದ ಮೇವನ್ನು ಪೂರೈಸುವಷ್ಟು ದಾಸ್ತಾನು ಗೋಶಾಲೆಗಳಲ್ಲಿ ಇದೆಯೇ; ಇದ್ದಲ್ಲಿ, ಸಂಗ್ರಹವಾಗಿರುವ ಮೇವಿನ ಪ್ರಮಾಣ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿ ಸಾಕಷ್ಟು ಪ್ರಮಾಣದ ಮೇವಿನ ದಾಸ್ತಾನು ಇಲ್ಲದಿರುವುದರಿಂದ ಹೊರ ರಾಜ್ಯಗಳಿಂದ ಮೇವನ್ನು ತರಿಸಿಕೊಳ್ಳಲು ಸರ್ಕಾರ ಉದ್ದೇಶಿಸಿದೆಯೇ; ಹಾಗಿದ್ದಲ್ಲಿ, ಈ ಕುರಿತು ಕೈಗೊಂಡಿರುವ ಕ್ರಮಗಳೇನು;

(ಊ) ರಾಜ್ಯದಲ್ಲಿ ಜಾನುವಾರುಗಳಿಗೆ ಮೇವು ಮತ್ತು ನೀರಿನ ಅಭಾವ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ನಗರಸಭೆ, ಪುರಸಭೆ, ಪಟ್ಟಣ ಪಂಚಾಯತ್‌ಗಳಲ್ಲಿ ಕುಡಿಯುವ ನೀರಿನ ಕೊರತೆ ಇರುವುದರ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) –**

೧೯೦ (೧೮೫೬) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ಜಿಲ್ಲೆಯಲ್ಲಿರುವ ನಗರಸಭೆ, ಪುರಸಭೆ, ಪಟ್ಟಣ ಪಂಚಾಯತ್‌ಗಳಲ್ಲಿ ಕುಡಿಯುವ ನೀರಿನ ಕೊರತೆ ಇರುವುದು ಸರ್ಕಾರದ

ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕುಡಿಯುವ ನೀರಿನ ಕೊರತೆ ನೀಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಆ) ಪಟ್ಟಣ ಪ್ರದೇಶಗಳಲ್ಲಿ ವಿದ್ಯುತ್ ಬಳಕೆಯನ್ನು ಉಳಿತಾಯ ಮಾಡಲು LED ಬಲ್ಬ್‌ಗಳನ್ನು ಅಳವಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರೈತರ ಅಕ್ರಮ ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸುವ ಬಗ್ಗೆ

**ಶ್ರೀ ರಾಮಪ್ಪ ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು) –**

೧೯೧(೧೮೪೨) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಅಕ್ರಮವಾಗಿ ಅಳವಡಿಸಿರುವ ರೈತರ ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸುವ ನಿಯಮ ಜಾರಿಗೆ ಬಂದಿದ್ದು ಯಾವಾಗ;

(ಆ) ಬಾಗಲಕೋಟೆ ಜಿಲ್ಲೆಯ, ಮುಧೋಳ ತಾಲ್ಲೂಕಿನಲ್ಲಿ ರೈತರ ಪಂಪ್‌ಸೆಟ್‌ಗಳ ಸಕ್ರಮಕ್ಕೆ ಎಷ್ಟು ಜನ ಮನವಿ ಸಲ್ಲಿಸಿದ್ದಾರೆ; ಹಾಗೂ ಈವರೆಗೆ ಎಷ್ಟು ಹಣ ಪಾವತಿಸಿದ್ದಾರೆ; ಅರ್ಜಿ ಸಲ್ಲಿಸಿರುವ ಎಷ್ಟು ಜನ ರೈತರ ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸಲಾಗಿದೆ;

(ಇ) ಹಣ ಪಾವತಿಸಿರುವ ರೈತರ ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ತ್ವರಿತಗೊಳಿಸಲು ಯಾವ ಕ್ರಮ ಕೈಗೊಳ್ಳಲಾಗುವುದು;

(ಈ) ಅಕ್ರಮ ಪಂಪ್‌ಸೆಟ್‌ಗಳನ್ನು ಸಕ್ರಮಗೊಳಿಸಲು ಅನುಸರಿಸಿದ ಮಾನದಂಡಗಳೇನು?

## ಮೂಡಿಗೆರೆ–ಬೈರಾಪುರ–ಶಿಶಿಲ ಮಾರ್ಗದಲ್ಲಿ ರಸ್ತೆ ನಿರ್ಮಾಣದ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನ ಸಭೆಯಿಂದ ಚುನಾಯಿತರಾದವರು) –**

೧೯೨(೧೮೦೭) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮೂಡಿಗೆರೆ–ಭೈರಾಪುರ–ಶಿಶಿಲ ಮಾರ್ಗವಾಗಿ ರಸ್ತೆ ನಿರ್ಮಿಸಲು ಸರ್ಕಾರ ತೀರ್ಮಾನಿಸಿದೆಯೇ; (ವಿವರ ನೀಡುವುದು)

(ಆ) ಸದರಿ ರಸ್ತೆಯನ್ನು ನಿರ್ಮಿಸಲು ಕಾರಣಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ಈ ರಸ್ತೆಯು, ಪಶ್ಚಿಮ ಘಟ್ಟಗಳ ದಟ್ಟ ಕಾಡುಗಳ ನಡುವೆ ಹಾದು ಹೋಗುವುದರಿಂದಾಗಿ, ಈಗಾಗಲೇ ವಿರೋಧ ವ್ಯಕ್ತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಸದರಿ ರಸ್ತೆಯು, ಎಷ್ಟು ಕಿಲೋಮೀಟರ್‌ನಷ್ಟು ದಟ್ಟ ಕಾಡುಗಳ ನಡುವೆ ಹಾದು ಹೋಗಲಿದೆ; ರಸ್ತೆ ಅಲೈನ್‌ಮೆಂಟ್‌ನ ಸಂಪೂರ್ಣ ವಿವರ ನೀಡುವುದು; ಹಾಗೂ ನಾಶವಾಗಬಹುದಾದ ಅರಣ್ಯ ಭೂಮಿ ಮತ್ತು ಮರಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಉ) ಈ ರಸ್ತೆ ನಿರ್ಮಾಣಕ್ಕೆ ಯಾವುದಾದರೂ ಖಾಸಗಿ ಕಂಪನಿಗೆ ಯೋಜನಾ ವರದಿ ತಯಾರಿಸಲು ಆದೇಶಿಸಲಾಗಿದೆಯೇ; ಆದೇಶಿಸಿದ್ದಲ್ಲಿ, ಸದರಿ ಯೋಜನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು ಯಾವಾಗ; (ಆದೇಶದ ಪ್ರತಿ ಒದಗಿಸುವುದು)

(ಊ) ಈ ರಸ್ತೆ ನಿರ್ಮಾಣ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗುವುದು ಯಾವಾಗ; ಪೂರ್ಣಗೊಳಿಸಲು ನಿಗದಿಪಡಿಸಿರುವ ಕಾಲಮಿತಿ ಎಷ್ಟು; ಸದರಿ ರಸ್ತೆ ನಿರ್ಮಾಣಕ್ಕೆ ಹಣಕಾಸನ್ನು ಹೇಗೆ ಹೊಂದಿಸಲಾಗುವುದು?

## ಗದಗ–ಬೆಟಗೇರಿ ನಗರಸಭೆಯ ಅಮೃತ ಯೋಜನೆಗಳ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೧೯೩(೧೭೭೦) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗದಗ–ಬೆಟಗೇರಿ ನಗರಸಭೆಗೆ ಅಮೃತ ಯೋಜನೆ ಮಂಜೂರಾಗಿದೆಯೇ; ಈ ಯೋಜನೆಯ ಉದ್ದೇಶಗಳೇನು; ಗದಗ ನಗರಕ್ಕೆ ಯಾವ ವರ್ಷ ಈ ಯೋಜನೆ ಮಂಜೂರಾಗಿದೆ; (ವಿವರ ನೀಡುವುದು)

(ಆ) ಈ ಯೋಜನೆಯ ಒಟ್ಟು ಗಾತ್ರವೇನು; ಇದರಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಪಾಲೆಷ್ಟು;

(ಇ) ಈ ಯೋಜನೆಯಡಿ ಕೈಗೊಳ್ಳಬೇಕಾದ ವಿವಿಧ ಕಾಮಗಾರಿಗಳನ್ನು ನಿರ್ಧರಿಸುವ ಅಧಿಕಾರ ಯಾರಿಗೆ ಇರುವುದು;

(ಈ) ಈ ಯೋಜನೆಯಡಿ ಗದಗ–ಬೆಟಗೇರಿ ನಗರಸಭೆಗೆ ಇಲ್ಲಿಯವರೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು; ಬಿಡುಗಡೆಯಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಅದಕ್ಕೆ ಖರ್ಚು ಮಾಡಿದ ಹಣ ಎಷ್ಟು; (ವಿವರ ನೀಡುವುದು)

(ಉ) ಅಮೃತ ಯೋಜನೆಯಡಿ ಈಗಾಗಲೇ ಕೈಗೊಂಡ ಕಾಮಗಾರಿಗಳಿಗೆ ಯಾವ ಸಭೆಯಲ್ಲಿ ಒಪ್ಪಿಗೆ ಪಡೆಯಲಾಗಿದೆ? (ಈ ಕುರಿತು ದಾಖಲೆ ಒದಗಿಸುವುದು)

## ಪುರಸಭೆ ಹಾಗೂ ನಗರಸಭೆಗಳ ಸೆಸ್‌ಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೯೪(೧೮೨೨) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪುರಸಭೆ, ನಗರಸಭೆ, ಮಹಾನಗರ ಪಾಲಿಕೆಗಳಿಗೆ ಯಾವ ಯಾವ ಮೂಲಗಳಿಂದ ಎಷ್ಟು ಸೆಸ್‌ನ್ನು ಸಂಗ್ರಹಿಸಲಾಗುತ್ತಿದೆ;

(ಆ) ವಿಜಯಪುರ ಮಹಾನಗರ ಪಾಲಿಕೆಗೆ ಶಿಕ್ಷಣ ನಿಧಿ, ಭಿಕ್ಷುಕರ ನಿಧಿ, ವಾಚನಾಲಯ ನಿಧಿ, ಕೊಳಚೆ ನಿರ್ಮೂಲನೆ ಹಾಗೂ ಇನ್ನಿತರೆ ನಿಧಿಗಳಿಂದ ಸಂಗ್ರಹಿಸಿರುವ ಮೊತ್ತ ಎಷ್ಟು; (ಪ್ರತ್ಯೇಕ ನಿಧಿವಾರು ಸಂಪೂರ್ಣವಾದ ಮಾಹಿತಿ ನೀಡುವುದು)

(ಇ) ಈ ನಿಧಿಗಳ ಮೊತ್ತವನ್ನು ಯಾವ ಯಾವ ಕಾಮಗಾರಿಗಳಿಗೆ ವಿನಿಯೋಗಿಸಲಾಗಿದೆ; ಇದರಲ್ಲಿ ಉಳಿದಿರುವ ಮೊತ್ತ ಎಷ್ಟು? (ಮಾಹಿತಿ ನೀಡುವುದು)

## ಸೌರ ವಿದ್ಯುತ್ ಪಾರ್ಕ್ ಯೋಜನೆ ಬಗ್ಗೆ

**ಶ್ರೀ ಕಾಂತರಾಜು (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೯೫(೧೮೧೨) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸಾಂಪ್ರದಾಯಿಕ ಇಂಧನಗಳ ಮೇಲಿನ ಅವಲಂಬನೆಯನ್ನು ತಗ್ಗಿಸಲು ರಾಜ್ಯದಲ್ಲಿ ಬೃಹತ್ ಪ್ರಮಾಣದ ಸೌರಶಕ್ತಿಯನ್ನು ಬಳಸಲು ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಬೃಹತ್ ಸೌರ ವಿದ್ಯುತ್ ಪಾರ್ಕ್ ಯೋಜನೆಯನ್ನು ಕೈಗೊಳ್ಳಲಾಗಿದೆ;

(ಇ) ಇದಕ್ಕಾಗಿ ರಾಜ್ಯ ಸರ್ಕಾರ ಖರ್ಚು ಮಾಡುತ್ತಿರುವ ಹಣವೆಷ್ಟು, ಹಾಗೂ ಈ ವಿದ್ಯುತ್ ಪಾರ್ಕ್‌ನಿಂದ ಎಷ್ಟು ಮೆಗಾವ್ಯಾಟ್ ವಿದ್ಯುತ್ ಉತ್ಪಾದಿಸುವ ಗುರಿ ಹೊಂದಲಾಗಿದೆ; (ಸಂಪೂರ್ಣ ವಿವರ ನೀಡುವುದು)

(ಈ) ತುಮಕೂರು ಜಿಲ್ಲೆಯ, ಪಾವಗಡ ತಾಲ್ಲೂಕಿನಲ್ಲಿ ಎಷ್ಟು ಎಕರೆ ಪ್ರದೇಶದಲ್ಲಿ ಈ ಯೋಜನೆಯನ್ನು ಅಳವಡಿಸಲಾಗಿದೆ; ಹಾಗೂ ಇದಕ್ಕಾಗಿ ಖರ್ಚು ಮಾಡುತ್ತಿರುವ ಹಣವೆಷ್ಟು; ಹೊಸದಾಗಿ ಸೃಷ್ಟಿಯಾಗಿರುವ ಉದ್ಯೋಗಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಉ) ಈ ಯೋಜನೆಗೆ ಪಾವಗಡ ತಾಲ್ಲೂಕಿನ ರೈತರಿಂದ ವಶಪಡಿಸಿಕೊಂಡ ಜಮೀನಿಗೆ ಪೂರ್ಣ ಪ್ರಮಾಣದ ಪರಿಹಾರ ನೀಡಲಾಗಿದೆಯೇ; ಮತ್ತು ಜಮೀನು ಕಳೆದುಕೊಂಡ ರೈತರ ಮಕ್ಕಳಿಗೆ ಅಲ್ಲಿ ಉದ್ಯೋಗವನ್ನು ನೀಡಲಾಗುವುದೇ?

**ಶ್ರೀನಿವಾಸ**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ನಿರ್ದೇಶಕರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು, ಕಾಸೂ 1165–1500 ಪ್ರತಿಗಳು (ಪಿ1)